**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 72 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಮಾನ್ಯ ಮುಖ್ಯಮಂತ್ರಿಯವರ ಹೇಳಿಕೆ.**

**ಪ್ರಶ್ನೆ:**

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೇವರಚಿಕ್ಕನಹಳ್ಳಿ ಗ್ರಾಮದ ಸರ್ವೆ ನಂ.27/2 ರಲ್ಲಿ 3 ಎಕರೆ 23 ಗುಂಟೆ ಜಮೀನನ್ನು ಬಿ.ಡಿ.ಎ ಭೂಸ್ವಾಧೀನಪಡಿಸಿಕೊಳ್ಳಲಾಗಿರುತ್ತದೆ. ತದನಂತರ ಬಿ.ಡಿ.ಎ ಬಡಾವಣೆ ರಚನೆ ಮಾಡಿ, ನಿರ್ಮಾಣ ಮಾಡಿ, ನಿವೇಶನಗಳನ್ನು ಹಂಚಿಕೆ ಮಾಡಿ, ಹಂಚಿಕೆಯಾದ ಸುಮಾರು 40 ವರ್ಷಗಳ ನಂತರ ಸದರಿ ಸರ್ಕಾರಿ ಸ್ವತ್ತನ್ನು ಅಕ್ರಮವಾಗಿ ಖಾಸಗಿ ವ್ಯಕ್ತಿ ಕಬಳಿಸಿಕೊಂಡಿರುತ್ತಾನೆ. ಇದರಲ್ಲಿ ಬಿ.ಡಿ.ಎ ಅಧಿಕಾರಿಗಳು ಷಾಮೀಲಾಗಿರುತ್ತಾರೆ. ಮುಂದುವರೆದು, ಸದರಿ ಖಾಸಗಿ ವ್ಯಕ್ತಿಯು ಆ ಸ್ವತ್ತನ್ನು ಬೇರೆಯವರಿಗೆ ಮರು ಮಾರಾಟ ಮಾಡಿರುವುದು ಹಾಗೂ ಜಾಯಿಂಟ್ ವೆಂಚರ್ ಮೂಲಕ ಒಡಂಬಡಿಕೆ ಮಾಡಿಕೊಂಡಿರುವುದರಿಂದ, ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟಾಗಿರುತ್ತದೆ. ಅಲ್ಲದೆ ಸದರಿ ಸ್ಥಳಕ್ಕೆ ಫಲಾನುಭವಿಗಳಿಗೆ ಭೇಟಿ ನೀಡಿದಾಗ ಬಿಡಿಎ ಯಿಂದ ಬದಲಿ ನಿವೇಶನವನ್ನು ಮಂಜೂರು ಮಾಡಿಸಿಕೊಂಡು ಬರುವಂತೆ ಗೂಂಡಾಗಿರಿ ಮಾಡುತ್ತಾ, ಸ್ಥಳೀಯ ಪೊಲೀಸ್ ಅಧಿಕಾರಿಗಳನ್ನು ಬಳಸಿಕೊಂಡು ಹೆದರಿಸುತ್ತಿರುತ್ತಾರೆ. ಈ ಸಂಬಂಧ ಎಫ್.ಐ.ಆರ್. ಸಹ ದಾಖಲಾಗಿರುತ್ತದೆ. ಈ ಪ್ರಕರಣದಲ್ಲಿ ಭಾಗಿಯಾದ ಬಿ.ಡಿ.ಎ ಅಧಿಕಾರಿಗಳು ಹಾಗೂ ಖಾಸಗಿ ವ್ಯಕ್ತಿಯ ವಿರುದ್ಧ ಇದುವರೆವಿಗೂ ಯಾವುದೇ ಕಾನೂನು ಕ್ರಮ ಜರುಗಿಸದೆ ಇರುವುದರಿಂದ, ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ**

ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೇವರಚಿಕ್ಕನಹಳ್ಳಿ ಗ್ರಾಮದ ಸರ್ವೆ ನಂ.27/2 ರಲ್ಲಿ 3 ಎಕರೆ 23 ಗುಂಟೆ ಜಮೀನನ್ನು ಪ್ರಾಧಿಕಾರದ ಬಿ.ಟಿ.ಎಂ. 4ನೇ ಹಂತದ ಬಡಾವಣೆ ರಚನೆಗಾಗಿ ಪ್ರಾರಂಭಿಕ ಹಾಗೂ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಅಂತಿಮ ಅಧಿಸೂಚನೆ ಸಂಖ್ಯೆ:ಹೆಚ್‌ಯುಡಿ/334 /ಎಂಎನ್‌ಎಕ್ಸ್/1990, ದಿನಾಂಕ: 03.11.1990 ರಂದು ಹೊರಡಿಸಲಾಗಿದೆ. ಸದರಿ ಜಮೀನಿಗೆ ಐತೀರ್ಮ ಅನುಮೋದನೆಯಾಗಿದ್ದು, ಬಡಾವಣೆ ರಚನೆಗಾಗಿ ದಿನಾಂಕ:30.11.1996 ರಂದು ತಾಂತ್ರಿಕ ವಿಭಾಗಕ್ಕೆ ಹಸ್ತಾಂತರಿಸಲಾಗಿರುತ್ತದೆ. ಭೂಸ್ವಾಧೀನ ಕಾಯ್ದೆ 1894ರ ಸೆಕ್ಷನ್ 16(2) ರಡಿ ಹೊರಡಿಸಿರುವ ಅಧಿಸೂಚನೆಯನ್ನು ದಿನಾಂಕ:08.02.2001ರ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಚುರಪಡಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆ ಮುಕ್ತಾಯವಾಗಿರುತ್ತದೆ.

ನಂತರ ಶ್ರೀಮತಿ ಶಾಂತಮ್ಮ ಮತ್ತು ಇತರರು ಭೂಸ್ವಾಧೀನದ ಕ್ರಮವನ್ನು ಪ್ರಶ್ನಿಸಿ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿದ್ದ ರಿಟ್ ಪಿಟಿಷನ್ ಸಂಖ್ಯೆ:41386-395/2017ರಲ್ಲಿ ದಿನಾಂಕ: 24.10.2019 ರಂದು ಅಂತಿಮ ಆದೇಶವಾಗಿರುತ್ತದೆ. ಅರ್ಜಿದಾರರು ದಿನಾಂಕ: 14.01.2020 ರಂದು ಹಿಂಬರಹವನ್ನು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿಯವರ ಮನವಿಯನ್ನು ಪರಿಶೀಲಿಸಿ ಕಾನೂನು ವಿಭಾಗದ ಅಭಿಪ್ರಾಯದಂತೆ ಸದರಿ ಸರ್ವೆ ನಂಬರಿನ ವಾಸ್ತವಾಂಶ ಮಾಹಿತಿಯನ್ನು ಅರ್ಜಿದಾರರಿಗೆ ನಿಯಮಾನುಸಾರ ಹಿಂಬರಹ ನೀಡಲಾಗಿದ್ದು, ಸದರಿ ಹಿಂಬರಹವು ನಿರಾಕ್ಷೇಪಣಾ ಪತ್ರವಾಗಿರುವುದಿಲ್ಲ. ಆದಾಗ್ಯೂ, ಸದರಿ ಹಿಂಬರಹವು ದುರುಪಯೋಗ-ವಾಗುತ್ತಿರುವುದು ಚರ್ಚೆಯಲ್ಲಿರುವುದರಿಂದ ಮಾನ್ಯ ನ್ಯಾಯಾಲಯದ ಆದೇಶವನ್ನು ಮತ್ತೊಮ್ಮೆ ಕಾನೂನಾತ್ಮಕವಾಗಿ ಪರಿಶೀಲಿಸಿ, ರಿಟ್ ಪಿಟಿಷನ್ ಸಂಖ್ಯೆ:41386-395/2017 ರ ಆದೇಶದ ವಿರುದ್ಧ ಮಾನ್ಯ ವಿಭಾಗೀಯ ಪೀಠಕ್ಕೆ ರಿಟ್ ಮೇಲ್ಮನವಿ ಸಂಖ್ಯೆ:398/20-21 ಅನ್ನು ದಾಖಲಿಸಲಾಗಿದ್ದು, ಇತ್ಯರ್ಥಕ್ಕೆ ಬಾಕಿ ಇರುತ್ತದೆ.

---

**ನಅಇ 384 ಬೆಂಭೂಸ್ವಾ 2022**

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ